**ಕರ್ನಾಟಕ ಸರ್ಕಾರ**

ಸಂಖ್ಯೆ.ಕಂಇ 164 ಟಿಎನ್‌ಆರ್ 2024

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:15-04-2024

**ಸುತ್ತೋಲೆ**

**ವಿಷಯ:** ಗುಡುಗು ಮತ್ತು ಸಿಡಿಲು ಬಡಿತ ಪ್ರತಿಕೂಲ ಪರಿಣಾಮಗಳನ್ನು ತಗ್ಗಿಸಲು ಸನ್ನದ್ಧತೆಗಾಗಿ ಸಲಹೆ/ಸೂಚನೆಗಳು - 2024.

*****

ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರವು ಗುಡುಗು ಮತ್ತು ಸಿಡಿಲು ಬಡಿತದಿಂದ ಉಂಟಾಗುವ ಪ್ರತಿಕೂಲ ಪರಿಣಾಮಗಳನ್ನು ತಗ್ಗಿಸಲು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ Advisory and Do's and Don'ts on Thunderstorm & Lightning-No.16/28/2023-RR ರಲ್ಲಿ ಸಲಹೆ/ಸೂಚನೆಗಳ ಬಗ್ಗೆ ವಿವರಿಸಿರುತ್ತದೆ. ಕರ್ನಾಟಕದ ಹಲವು ಭಾಗಗಳಲ್ಲಿ ಗುಡುಗು - ಸಿಡಿಲು ಸಾಮಾನ್ಯವಾಗಿ ಮುಂಗಾರು ಪೂರ್ವದಲ್ಲಿ ಹಾಗೂ ಮುಂಗಾರಿನಲ್ಲಿ ಕಾಣಿಸಿಕೊಳ್ಳುತ್ತದೆ. ಸಿಡಿಲು ಸಾಮಾನ್ಯವಾಗಿ ಮಧ್ಯಾಹ್ನ ಅಥವಾ ಸಂಜೆ ಸಂಭವಿಸುವ ಸಾಧ್ಯತೆ ಹೆಚ್ಚಾಗಿರುತ್ತದೆ. ಗುಡುಗು ಸಿಡಿಲಿನಿಂದಾಗುವ ಅಪಾಯಗಳನ್ನು ತಗ್ಗಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಲಾಗಿದೆ:

## I. ಗುಡುಗು ಮತ್ತು ಸಿಡಿಲಿನ ಅಪಾಯಗಳನ್ನು ತಗ್ಗಿಸಲು ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು ತೆಗೆದುಕೊಳ್ಳಬೇಕಾದ ಅಗತ್ಯವಿರುವ ಉಪಶಮನ ಮತ್ತು ಸನ್ನದ್ಧತೆ ಕ್ರಮಗಳು:

1. ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ (KSNMDC) ಹಾಗೂ Indian Meteorological Department (IMD) ಸಿಡಿಲಿನ ಮುನ್ಸೂಚನೆಗಳನ್ನು ಸ್ಥಳೀಯ ಮಟ್ಟಕ್ಕೆ ತಲುಪಿಸಲು ಸಾಮಾಜಿಕ ಮತ್ತು ಇತರೆ ಸಮೂಹ ಮಾಧ್ಯಮಗಳ ಮೂಲಕ ಸಾರ್ವಜನಿಕರಿಗೆ ನಿರ್ದಿಷ್ಟ ಮುನ್ನೆಚ್ಚರಿಕೆಯನ್ನು real time basis ನಲ್ಲಿ Common Alerting Protocol (CAP)ನ ಮೂಲಕ ಪ್ರಸಾರ ಮಾಡುತ್ತಿದ್ದು, ಈ ಮುನ್ಸೂಚನೆಗಳನ್ನು ಎಲ್ಲಾ ಮಾಧ್ಯಮಗಳ ಮೂಲಕ ಪ್ರಚುರಪಡಿಸುವುದು.

2. ಸಿಡಿಲಿಗೆ ಸಾಮಾನ್ಯವಾಗಿ ತುತ್ತಾಗುವಂತಹ ಸ್ಥಳಗಳನ್ನು ಗುರುತಿಸಿ ಜೀವಹಾನಿಯನ್ನು ತಪ್ಪಿಸುವುದು ಹಾಗೂ ಸಾರ್ವಜನಿಕ ಆಸ್ತಿ / ಮೂಲಸೌಕರ್ಯಗಳ ರಕ್ಷಣೆಗೆ ಕ್ರಮ ವಹಿಸುವುದು.

3. ಸ್ಥಳೀಯ ಜನರನ್ನು ಎಚ್ಚರಿಸಲು ಹಾಗೂ ಗುಡುಗು ಮತ್ತು ಸಿಡಿಲಿನ ಅಪಾಯಗಳನ್ನು ತಗ್ಗಿಸಲು ಹಾಗೂ ಜೀವಹಾನಿಯನ್ನು ತಪ್ಪಿಸಲು ಸಲಹೆ ಸೂಚನೆಗಳನ್ನು ನೀಡಲು ಶಾಲೆ, ಕಾಲೇಜುಗಳು, ರೈತ ಸಂಪರ್ಕ ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಪ್ರಾಥಮಿಕ ಪಶು ವೈದ್ಯಕೀಯ ಚಿಕಿತ್ಸಾ ಕೇಂದ್ರಗಳು ಹಾಗೂ ಸಮುದಾಯ ಕೇಂದ್ರಗಳಲ್ಲಿ ವ್ಯಾಪಕ ತಿಳುವಳಿಕೆ ಹಾಗೂ ಮಾಹಿತಿ ನೀಡುವುದು.

4. ಗುಡುಗು-ಸಿಡಿಲು ಸಂದರ್ಭಗಳಲ್ಲಿ ಅನುಸರಿಸಬೇಕಾದ ಮತ್ತು ಅನುಸರಿಸಬಾರದ ಕೆಲಸಗಳನ್ನು ಸಾಮಾಜಿಕ ಮಾಧ್ಯಮಗಳ ಮೂಲಕ ಪ್ರಸರಣ ಮಾಡುವುದು ಹಾಗೂ ಮಾಹಿತಿ ಶಿಕ್ಷಣ ಸಂವಹನ (ಐಇಸಿ) ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು.

## II. ಗುಡುಗು ಮತ್ತು ಸಿಡಿಲು ಸಂದರ್ಭದಲ್ಲಿ ಸಾರ್ವಜನಿಕರು ಪಾಲಿಸಬೇಕಾದ ಸಲಹೆ ಸೂಚನೆಗಳು-

1. ಹೊರಗೆ ಹೋಗುವ ಅನಿವಾರ್ಯವಿದ್ದಲ್ಲಿ ಹವಾಮಾನ ಮುನ್ಸೂಚನೆ ಹಾಗೂ Common Alerting Protocol (CAP) ಮುಖಾಂತರ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದಿಂದ ಬರುವ Alerts / ಸಂದೇಶಗಳನ್ನು ಗಮನಿಸುವುದು.
2. ಪ್ರತಿಕೂಲ ಹವಾಮಾನದ ಸಮಯದಲ್ಲಿ ವಿಶೇಷವಾಗಿ ಕೃಷಿ ಕ್ಷೇತ್ರದಲ್ಲಿ ಕೆಲಸ ಮಾಡಲು, ಜಾನುವಾರುಗಳನ್ನು ಮೇಯಿಸಲು, ಮೀನುಗಾರಿಕೆ ಮತ್ತು ದೋಣಿಗಳನ್ನು ಓಡಿಸಲು ಅಥವಾ ಸಾಮಾನ್ಯ ಪ್ರಯಾಣಕ್ಕಾಗಿ ಮನೆಯಿಂದ ಹೊರಗೆ ಹೋಗದಿರುವುದು.
3. ಗುಡುಗು-ಸಿಡಿಲಿನ ಸಂದರ್ಭದಲ್ಲಿ ಲೋಹದ ತಗಡನ್ನು ಹೊದಿಸಿರುವ ಮನೆಗಳು ಸುರಕ್ಷಿತವಲ್ಲ, ಸುರಕ್ಷಿತವಾದ ಕಟ್ಟಡಗಳಾದ ಮನೆಗಳು, ಕಛೇರಿಗಳು, ಅಂಗಡಿಗಳು ಮತ್ತು ಕಿಟಕಿ ಮುಚ್ಚಿರುವಂತಹ ವಾಹನಗಳಲ್ಲಿ ಆಶ್ರಯ ಪಡೆಯುವುದು.
4. ಬೆಟ್ಟಗಳು, ಪರ್ವತ ಶ್ರೇಣಿಗಳು ಅಥವಾ ಶಿಖರಗಳಂತಹ ಎತ್ತರದ ಪ್ರದೇಶಗಳಿಂದ ಕೆಳಗೆ ಇಳಿದು ಪ್ರವಾಹ ಬರದಂತಹ ತಗ್ಗು ಪ್ರದೇಶವನ್ನು ಖಚಿತಪಡಿಸಿಕೊಂಡು ಆಶ್ರಯ ಪಡೆಯುವುದು.
5. ಕೆರೆ ಮತ್ತು ನದಿಗಳು ಹಾಗೂ ಇನ್ನಿತರೆ ನೀರಿನ ಮೂಲಗಳಿಂದ ತಕ್ಷಣವೇ ದೂರವಿರುವುದು.
6. ವಿದ್ಯುತ್ ಉಪಕರಣ ಹಾಗೂ ವಿದ್ಯುತ್ ಸರಬರಾಜು, ಮಾರ್ಗ, ದೂರವಾಣಿ ಸಂಪರ್ಕ, ಮೊಬೈಲ್ ಟವರ್, ಪವನ ವಿದ್ಯುತ್ ಗೋಪುರ ಹಾಗೂ ರೈಲು ಹಳಿಗಳಿಂದ ದೂರವಿರುವುದು.
7. ಗುಡುಗು - ಸಿಡಿಲಿನ ಮುನ್ಸೂಚನೆ ಅಥವಾ ಮುನ್ನೆಚ್ಚರಿಕೆ ಇದ್ದಲ್ಲಿ ಪ್ರಯಾಣವನ್ನು ಮುಂದೂಡುವುದು ಹಾಗೂ ಮನೆಗಳಲ್ಲೇ ಇರುವುದು. ವಾಹನ ಚಾಲನೆಯಲ್ಲಿದ್ದರೆ ತಕ್ಷಣವೇ ವಾಹನ ನಿಲ್ಲಿಸಿ ವಾಹನದಲ್ಲಿಯೇ ಆಶ್ರಯ ಪಡೆಯುವುದು ಹಾಗೂ ವಾಹನ ಕಿಟಕಿಗಳನ್ನು ಮುಚ್ಚಿ ವಾಹನದ ಒಳಗೆ ಇರುವುದು ಹಾಗೂ ಮರಗಳು ಮತ್ತು ವಿದ್ಯುತ್ ಲೈನ್‌ಗಳಿಂದ ದೂರ ವಾಹನ ನಿಲುಗಡೆ ಮಾಡುವುದು.

8. ಗುಡುಗು ಸಿಡಿಲಿನ ಸಮಯದಲ್ಲಿ ಗುಂಪಿನಲ್ಲಿದ್ದರೆ ಅಪಾಯವನ್ನು ಕಡಿಮೆ ಮಾಡಲು ಸಾಕಷ್ಟು ಅಂತರವನ್ನು ಕಾಯ್ದುಕೊಳ್ಳುವುದು.
9. ಗುಡುಗು ಮತ್ತು ಸಿಡಿಲು ಸಂದರ್ಭದಲ್ಲಿ ಹೊರಾಂಗಣದಲ್ಲಿ ಕೆಲಸ ಮಾಡುತ್ತಿದ್ದರೆ ಮತ್ತು ಸುರಕ್ಷಿತ ಸ್ಥಳದಲ್ಲಿ ಆಶ್ರಯ ಪಡೆಯಲು ಸಾಕಷ್ಟು ಸಮಯವಿಲ್ಲದಿದ್ದರೆ ಎರಡು ಕಾಲುಗಳನ್ನು ಜೋಡಿಸಿ ಮಂಡಿಯೂರಿ ಕುಳಿತುಕೊಂಡು ತಲೆಯನ್ನು ಬಗ್ಗಿಸಿ ಕಿವಿಗಳನ್ನು ಮುಚ್ಚಿಕೊಳ್ಳುವುದು.
10. ಮಿಂಚನ್ನು ಆಕರ್ಷಿಸುವಂತಹ ವಿದ್ಯುತ್ ಅಥವಾ ಟೆಲಿಫೋನ್ ಕಂಬಗಳು ಅಥವಾ ಮರಗಳ ಕೆಳಗೆ ಆಶ್ರಯ ಪಡೆಯಬಾರದು.
11. ಅರಣ್ಯ ಪ್ರದೇಶದಲ್ಲಿದ್ದರೆ ಸಣ್ಣ /ಚಿಕ್ಕ ಮರಗಳ ಕೆಳಗೆ ಆಶ್ರಯ ಪಡೆಯುವುದು.
12. ಲೋಹದ ವಸ್ತುಗಳನ್ನು ಬಳಸಬಾರದು ಮತ್ತು ಬೈಕುಗಳು, ವಿದ್ಯುತ್ ಅಥವಾ ದೂರವಾಣಿ ಕಂಬಗಳು, ತಂತಿ ಬೇಲಿ, ಯಂತ್ರಗಳು ಇತ್ಯಾದಿಗಳಿಂದ ದೂರವಿರುವುದು.
13. ಸಿಡಿಲು ಸಂದರ್ಭದಲ್ಲಿ ಮೊಬೈಲ್ ಫೋನ್ ಗಳನ್ನು ಬಳಸಬಾರದು ಹಾಗೂ ವಿದ್ಯುತ್ ಸಂಪರ್ಕ ಹೊಂದಿರುವ ದೂರವಾಣಿಯನ್ನು ಬಳಸಬಾರದು.
14. ಕಬ್ಬಿಣದ ಸರಳುಗಳಿಂದ ಕೂಡಿದ ಛತ್ರಿಗಳನ್ನು ಬಳಸಬಾರದು.
15. ಗುಡುಗು ಸಿಡಿಲಿನ ಸಮಯದಲ್ಲಿ ಕಿಟಕಿ, ಬಾಗಿಲುಗಳನ್ನು ಮುಚ್ಚಿ. ಬೆಂಕಿ ಮತ್ತು ವಿದ್ಯುತ್ ಶಕ್ತಿ ಸಂಪರ್ಕದಿಂದ ದೂರವಿರುವುದು.
16. ಮಕ್ಕಳು, ವಯೋವೃದ್ಧರು, ಜಾನುವಾರುಗಳನ್ನು ಹಾಗೂ ಸಾಕು ಪ್ರಾಣಿಗಳನ್ನು ಸುರಕ್ಷಿತ ಸ್ಥಳಗಳಲ್ಲಿ ಇರುವಂತೆ ಗಮನಹರಿಸುವುದು.
17. ಹಾರುವ ಮತ್ತು ಅಪಘಾತಕ್ಕೆ ಕಾರಣವಾಗಬಹುದಾದ ಮರದ ಕಟ್ಟಿಗೆ ಅಥವಾ ಇತರೆ ಯಾವುದೇ ಅವಶೇಷಗಳನ್ನು ತೆಗೆದುಹಾಕುವುದು.
18. ಸಿಡಿಲು ಸಂದರ್ಭದಲ್ಲಿ ಕಟ್ಟಡದ ಕೊಳಾಯಿ ಮತ್ತು ಲೋಹದ ಕೊಳವೆಗಳ ಮೂಲಕ ವಿದ್ಯುತ್ ಹರಿಯುವ ಸಾಧ್ಯತೆ ಇರುವುದರಿಂದ ಸಿಡಿಲು ಉಂಟಾಗುವ ಸಂದರ್ಭದಲ್ಲಿ ಸ್ನಾನ ಅಥವಾ ಶವರ್ ತೆಗೆದುಕೊಳ್ಳಬಾರದು ಪಾತ್ರೆಗಳನ್ನು ತೊಳೆಯಬಾರದು, ಬಟ್ಟೆ ಒಗೆಯಬಾರದು.
19. ಗುಡುಗು ಸಿಡಿಲಿನ ಸಮಯದಲ್ಲಿ ಮೋಟಾರ್ ಸೈಕಲ್ ಅಥವಾ ಇನ್ನಿತರೆ ಯಾವುದೇ ತೆರೆದ ವಾಹನಗಳ ಸಂಚಾರವನ್ನು ಮಾಡದಿರುವುದು.
20. ಆಟದ ಮೈದಾನ, ಉದ್ಯಾನವನಗಳು ಈಜುಕೊಳ ಮತ್ತು ಕಡಲ ತೀರಗಳಿಗೆ ಹೋಗುವುದನ್ನು ತಪ್ಪಿಸುವುದು.
21. ದೋಣಿ ವಿಹಾರ ಅಥವಾ ಈಜುತ್ತಿದ್ದರೆ ಸಾಧ್ಯವಾದಷ್ಟು ಸುರಕ್ಷಿತ ಸ್ಥಳದಲ್ಲಿ ಆಶ್ರಯ ಪಡೆಯುವುದು.
22. ಅರಣ್ಯ ಪ್ರದೇಶದಿಂದ ಗಿಡ ಗಡ್ಡೆಗಳಿಲ್ಲದ ಸ್ವಚ್ಛ ಪ್ರದೇಶದ ಕಡೆಗೆ ಚಲಿಸುವುದು ಮಿಂಚಿನ ಒಡೆತದಿಂದಾಗಿ ಕಾಡ್ಗಿಚ್ಚು ಸಂಭವಿಸುವ ಸಾಧ್ಯತೆಯಿದೆ.

23. ಗುಡುಗು ಸಿಡಿಲಿನ ಸಮಯದಲ್ಲಿ ಬಯಲು ಪ್ರದೇಶದಲ್ಲಿ ಸಿಲುಕಿಕೊಂಡಿದ್ದರೆ, ತಕ್ಷಣವೇ ಹತ್ತಿರದಲ್ಲೇ ಇರುವ ಸುರಕ್ಷಿತ ಸ್ಥಳದಲ್ಲಿ ಆಶ್ರಯ ಪಡೆದು ಅಪಾಯದಿಂದ ಪಾರಾಗುವುದು.
24. ಮಿಂಚು ಬರುವ ಸಮಯದಲ್ಲಿ ರಬ್ಬರ್ ಸೋಲ್ ಇರುವ ಪಾದರಕ್ಷೆಗಳು ಮತ್ತು ಕಾರಿನ ಚಕ್ರಗಳು ಸುರಕ್ಷಿತವಲ್ಲದ ಕಾರಣ ಅವುಗಳಿಂದ ದೂರವಿರುವುದು.
25. ವಿದ್ಯುತ್ ಸಂಪರ್ಕ ಹೊಂದಿರುವಂತಹ ವಿದ್ಯುತ್ /ಎಲೆಕ್ಟ್ರಿಕಲ್ ಉಪಕರಣಗಳಾದ ಕಂಪ್ಯೂಟರ್, ಲ್ಯಾಪ್‌ಟಾಪ್, ವಿಡಿಯೋ ಗೇಮ್ ಸಾಧನಗಳು, ಮೊಬೈಲ್ ಫೋನ್, ವಾಷಿಂಗ್ ಮಷಿನ್, ಸ್ಟವ್ ಹಾಗೂ ಇತರೆ ವಿದ್ಯುತ್ ಉಪಕರಣಗಳ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸುವುದು.
26. ಬಾಗಿಲುಗಳು, ಕಿಟಕಿಗಳು, ಮಂಟಪಗಳು, ಕಾಂಕ್ರಿಟ್ ನೆಲ, ಬೆಂಕಿಯ ಸ್ಥಳಗಳು, ಸ್ಟವ್‌ಗಳು, ಬಾತ್‌ಟಬ್‌ಗಳು ಅಥವಾ ಇತರೆ ವಿದ್ಯುತ್ ಉಪಕರಣಗಳಿಂದ ದೂರವಿರುವುದು.

## III. ಸಿಡಿಲು / ಮಿಂಚು ಬಡಿದಾಗ ಪಾಲಿಸಬೇಕಾದ ಪ್ರಥಮ ಚಿಕಿತ್ಸಾ ವಿಧಾನ :

1. ಸಿಡಿಲು / ಮಿಂಚು ಬಡಿದ ಸಮಯದಲ್ಲಿ ಪ್ರಾಥಮಿಕವಾಗಿ 112 / 108 ಸಹಾಯವಾಣಿಗೆ ಕರೆ ಮಾಡಬೇಕು.

2. ವೈದ್ಯಕೀಯ ಸಿಬ್ಬಂದಿಯು ಆಗಮಿಸುವ ಮುನ್ನವೇ ಈ ಕೆಳಕಂಡಂತೆ ನೀಡುವ ಅಗತ್ಯ ಪ್ರಥಮ ಚಿಕಿತ್ಸೆಯಿಂದ ಸಿಡಿಲು / ಮಿಂಚಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ಜೀವವನ್ನು ಉಳಿಸಬಹುದಾಗಿದೆ. ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ದೇಹದಲ್ಲಿ ಯಾವುದೇ ವಿದ್ಯುತ್ತಿನ ಕಣಗಳು( electrical charges) ಸಂಚಾರವಾಗುವುದಿಲ್ಲ. ಆದ್ದರಿಂದ, ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯನ್ನು ಮುಟ್ಟಿ ಉಪಚರಿಸುವ ವ್ಯಕ್ತಿಗೆ ಯಾವುದೇ ಅಪಾಯವಿರುವುದಿಲ್ಲ.

3. ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ಉಸಿರಾಟ ಹಾಗೂ ಎದೆ ಬಡಿತವನ್ನು ಪರೀಕ್ಷಿಸಬೇಕು. ವ್ಯಕ್ತಿಯ ದವಡೆಗೆ ನೇರವಾಗಿ ಕುತ್ತಿಗೆಯಲ್ಲಿರುವ ರಕ್ತನಾಳವನ್ನು (Carotid Artery) ಪರೀಕ್ಷಿಸುವುದರಿಂದ ಸುಲಭವಾಗಿ ನಾಡಿ ಮಿಡಿತವನ್ನುತಿಳಿಯಬಹುದು.

4. ವ್ಯಕ್ತಿಯಲ್ಲಿ ಉಸಿರಾಟವು ಕಂಡು ಬರದಿದ್ದಲ್ಲಿ, ತಕ್ಷಣವೇ ಕೃತಕ ಉಸಿರಾಟ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕು. ವ್ಯಕ್ತಿಯಲ್ಲಿ ಎದೆಬಡಿತವು ಕಂಡು ಬರದಿದ್ದಲ್ಲಿ ತಕ್ಷಣವೇ Cardiac compressions ಹಾಗೂ Cardiopulmonary Resuscitation ಪ್ರಕ್ರಿಯೆಯನ್ನು ಪ್ರಾರಂಭಿಸಬೇಕು.

5. ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ಕಣ್ಣಿನ ದೃಷ್ಟಿ, ಕಿವಿಕೇಳಿಸುವಿಕೆ ಹಾಗೂ ಮೂಳೆಗಳ ಮುರಿದಿವೆಯೇ ಎಂದು ಪರೀಕ್ಷಿಸಬೇಕು, ಇದರಿಂದ ಪಾರ್ಶ್ವವಾಯು/ ಲಕ್ವಾ ಹೊಡೆಯುವುದನ್ನು ಮತ್ತು ಅಧಿಕ ರಕ್ತಸ್ರಾವದಿಂದ ಉಂಟಾಗುವ ಅಪಾಯಗಳನ್ನು ತಡೆಗಟ್ಟಬಹುದು.

6. ಸಿಡಿಲು ಬಡಿಯುವ ಸಾಧ್ಯತೆಯು ಮುಂದುವರೆಯುವುದರ ಬಗ್ಗೆ ಈಗಾಗಲೇ ಸಿಡಿಲಿನ ಹೊಡೆತಕ್ಕೆ ಒಳಗಾಗಿರುವ ವ್ಯಕ್ತಿ ಹಾಗೂ ಅವರನ್ನು ರಕ್ಷಿಸುವವರು ಎಚ್ಚರವಹಿಸಬೇಕು.

ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯು ಅಪಾಯಕಾರಿ ಸ್ಥಳದಲ್ಲಿದ್ದರೆ, ತಕ್ಷಣವೇ ಅವನನ್ನು / ಅವಳನ್ನು ಸೂಕ್ತ ರಕ್ಷಣಾ ಸ್ಥಳಕ್ಕೆ ಸ್ಥಳಾಂತರಿಸಬೇಕು.

7. ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯು ವಿವಿಧ ರೀತಿಯ ಸುಟ್ಟಗಾಯಗಳಿಂದ ಬಳಲಬಹುದು ಹಾಗೂ ಕಾಣದ ಗಾಯಗಳು/ ಅಘಾತಕ್ಕೆ ಒಳಗಾಗಿರಬಹುದು. ಆದ್ದರಿಂದ, ವ್ಯಕ್ತಿಯಲ್ಲಿ ಇಂತಹ ಲಕ್ಷಣಗಳಿದ್ದಲ್ಲಿ, ಸೂಕ್ತ ಚಿಕಿತ್ಸೆಗಾಗಿ ತಕ್ಷಣವೇ ಹತ್ತಿರದ ಆಸ್ಪತ್ರೆಗೆ ಕಳುಹಿಸಬೇಕು.

8. ಸಿಡಿಲು ಬಡಿದಿರುವ ವ್ಯಕ್ತಿಯಿರುವ ಸ್ಥಳಕ್ಕೆ ತಲುಪಲು ಹಾಗೂ ಸಿಡಿಲು ಬಡಿತಕ್ಕೆ ಒಳಗಾದ ವ್ಯಕ್ತಿಯ ಆರೋಗ್ಯಸ್ಥಿತಿಯ ಬಗ್ಗೆ ನಿಖರವಾದ ಮಾಹಿತಿ ನೀಡಬೇಕು ಮತ್ತು ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯನ್ನು ತಕ್ಷಣವೇ ಹತ್ತಿರದ ಆಸ್ಪತ್ರೆಗೆ ಕರೆದೊಯ್ಯಬೇಕು.

**(ಶಿವಶಂಕರ್ ಎಸ್.ಆರ್.)**

ಸರ್ಕಾರದ ಉಪ ಕಾರ್ಯದರ್ಶಿ,
ಕಂದಾಯ ಇಲಾಖೆ
(ವಿಪತ್ತು ನಿರ್ವಹಣೆ ಹಾಗೂ ನೋಂ & ಮು)

**ಇವರಿಗೆ:**

1. ಪ್ರಾದೇಶಿಕ ಆಯುಕ್ತರು, ಬೆಂಗಳೂರು, ಮೈಸೂರು, ಕಲಬುರಗಿ ಮತ್ತು ಬೆಳಗಾವಿ ವಿಭಾಗ.
2. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತು ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ಕರ್ನಾಟಕ.
3. ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
4. ಎಲ್ಲಾ ಜಿಲ್ಲಾ ಆರೋಗ್ಯಾಧಿಕಾರಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
5. ಎಲ್ಲಾ ಉಪ ನಿರ್ದೇಶಕರು, ಪಶುಸಂಗೋಪನೆ / ಮೀನುಗಾರಿಕೆ ಇಲಾಖೆ.

**ಪ್ರತಿ ಮಾಹಿತಿಗಾಗಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ.
2. ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಇಲಾಖೆಯ ಕಾರ್ಯದರ್ಶಿಗಳು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಪಶುಸಂಗೋಪನೆ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಮುಖ್ಯ ಆಯುಕ್ತರು, ಬಿಬಿಎಂಪಿ, ಬೆಂಗಳೂರು.
6. ಪೊಲೀಸ್ ಮಹಾ ನಿರ್ದೇಶಕರು, ಅಗ್ನಿ ಶಾಮಕ ಮತ್ತು ತುರ್ತು ಸೇವೆಗಳು.